# ಭತ್ತದಲ್ಲಿ ಎಲೆ ಸುರುಳಿ ಹುಳುವಿನ ಕೀಟದ ಭಾಧೆ







## ಕೀಟದ ಹಾನಿಯ ಲಕ್ಷಣಗಳು

ಹುಳುಗಳು ಎಲೆಯ ಅಂಚನ್ನು ಮಡಚಿ ಸುರುಳಿ ಸುತ್ತಿಕೊಂಡು ಎಲೆಯ ಹಸಿರುಭಾಗವನ್ನು ಕೆರೆದು ತಿನ್ನುತ್ತವೆ. ಇದರಿಂದ ಪೈರು ಬೆಳ್ಳಗೆ ಬಿಳಿಚಿ ಕೊಂಡಂತೆ ಕಾಣಿಸುತ್ತದೆ. ಬಾಧೆಯು ತೀವ್ರವಾದಾಗ ಬೆಳವಣಿಗೆ ಕುಂಠಿತವಾಗಿ ತೆನೆ ಬರದೆ ನಷ್ಟವುಂಟಾಗುತ್ತದೆ.

## ಹತೋಟಿ ವಿಧಾನಗಳು

- ಇದರ ಹತೋಟಿಗೆ ಗದ್ದೆಯ ಬದುವಿನಲ್ಲಿರುವ ಕಳೆಗಳನ್ನು ಕಿತ್ತು ಸ್ವಚ್ಛಗೊಳಿಸಬೇಕು.
- ಕೀಟವಿರುವ ಸೂಚನೆಯನ್ನು ನೋಡಿಕೊಂಡು 2.0 ಮಿ.ಲೀ. ಕ್ವಿನಾಲ್‌ಫಾಸ್ (ಏಕಲಕ್ಸ್) ಅಥವಾ ಫ್ಲುಬೆಂಡಮೈಡ್ 0.4 ಮಿ.ಲಿ ಇವುಗಳಲ್ಲಿ ಯಾವುದಾದರೂ ಒಂದು ಕೀಟನಾಶಕವನ್ನು ಒಂದು ಲೀಟರ್ ನೀರಿನಲ್ಲಿ ಬೆರೆಸಿ ಸಿಂಪಡಿಸಬೇಕು.
- ಸಿಂಪರಣೆ ಮಾಡುವಾಗ ಕೀಟನಾಶಕಕ್ಕೆ ಅಂಟು ದ್ರಾವಣವನ್ನು ಸೇರಿಸಿ ಸಿಂಪಡಿಸುವುದು ಉತ್ತಮ.

ಭಾ.ಕೃ.ಅ.ಪ– ಕೃಷಿ ವಿಜ್ಞಾನ ಕೇಂದ್ರ, ಗೋಣಿಕೊಪ್ಪಲು, ಕೊಡಗು ಜಿಲ್ಲೆ, ದೂರವಾಣಿ: 08274-295274